**ಪ್ರಧಾನ ದಿವಾನಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು.**

**ಸಿ.ಸಿ. 2351/2025**

**ಫಿರ್ಯಾದುದಾರರು** : ಸರ್ಕಾರದ ಪರವಾಗಿ, ಹುಲ್ಲಹಳ್ಳಿ ಪೋಲೀಸ್ ಠಾಣೆ.

ವಿರುದ್ಧ

**ಆರೋಪಿ** : ಶಿವಕುಮಾರ್ ಬಿನ್ ಕರಿಯಪ್ಪ,
ವಯಸ್ಸು 31 ವರ್ಷ,
ವಾಸಃ ಅಶೋಕ ರಸ್ತೆ, ವೀರನಗೆರೆ, ಮೈಸೂರು.

:: **ಆಪಾದನೆ** ::

**ಶ್ರೀ. ಸತೀಶ ಕೆ.ಜಿ., ಬಿ.ಎ., ಎಲ್.ಎಲ್.ಬಿ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ., ನಂಜನಗೂಡು, ಆದ ನಾನು ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆ:-**

ದಿನಾಂಕ 20.06.2025 ರಂದು ಮಧ್ಯಾಹ್ನ 1.20 ಗಂಟೆ ಸಮಯದಲ್ಲಿ ಹುಲ್ಲಹಳ್ಳಿ ಪೋಲೀಸ್ ಠಾಣಾ ವ್ಯಾಪ್ತಿಯಲ್ಲಿರುವ ಕಣೇನೂರು ಗ್ರಾಮದ ಹತ್ತಿರ ಹುಲ್ಲಹಳ್ಳಿ–ಹೊಮ್ಮರಗಳ್ಳಿ ರಸ್ತೆಯಲ್ಲಿ ಆರೋಪಿಯಾದ ನೀವು ನಿಮ್ಮ ಬಾಬ್ತು ಟ್ಯಾಂಕರ್ ನಂ.ಕೆಎ–26–ಎ–6892 ನ್ನು ಅತಿವೇಗ, ಅಜಾಗರೂಕತೆ ಮತ್ತು ನಿರ್ಲಕ್ಷ್ಯತನದಿಂದ ಮಾನವ ಜೀವಕ್ಕೆ ಅಪಾಯವುಂಟಾಗುವ ರೀತಿಯಲ್ಲಿ ಚಾಲನೆ ಮಾಡಿ ಅಪಘಾತವನ್ನುಂಟು ಮಾಡಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತಾ ಕಲಂ 281 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಪ್ರಶ್ನೆ-1: ಮೇಲೆ ಹೇಳಿದಂತೆ ನಿಮಗೆ ಓದಿ ಹೇಳಿ ವಿವರಿಸಿದ ಆಪಾದನೆಯನ್ನು ಅರ್ಥಮಾಡಿಕೊಂಡಿರುವಿರಾ?

ಉತ್ತರ: ಆರೋಪಿ

ಪ್ರಶ್ನೆ-2: ಅಪರಾಧವನ್ನು ಒಪ್ಪಿಕೊಳ್ಳುವಿರಾ ಅಥವಾ ಆಪಾದನೆ ವಿಚಾರಣೆಯಾಗಬೇಕೆ?

ಉತ್ತರ: ಆರೋಪಿ

(ಆರೋಪಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಈ ಆಪಾದನೆಯನ್ನು ಓದಿ ತಿಳಿಸಿ ಹೇಳಲಾಗಿ ಸದರಿ ಆರೋಪಿಯು ಹೇಳಿದ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತ್ತೆಂದು ದೃಢೀಕರಿಸಿರುತ್ತೇನೆ.)

ಸಹಿ/–

**ದಿನಾಂಕಃ 02.03.2026** **ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.**
**ನಂಜನಗೂಡು.**